# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.01.2026** **18.40 hrs**

<><*<><>*><>

ಮುಖ್ಯಾಂಶಗಳು

- ಮಕ್ಕಳ ಸಾಮಾಜಿಕ ಮಾಧ್ಯಮ ಪ್ರವೇಶ ನಿರ್ಬಂಧಿಸಲು ಸರ್ಕಾರ ಚಿಂತನೆ - ವಿಧಾನಸಭೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ
- ದೊಡ್ಡಬಳ್ಳಾಪುರ ಕೆರೆಗೆ ಸಂಸ್ಕರಿಸಿದ ಕೊಳಚೆ ನೀರನ್ನು ಹರಿಸದಂತೆ ಸರ್ಕಾರಕ್ಕೆ ಜನಪ್ರತಿನಿಧಿಗಳ ಮನವಿ
- ವಿದ್ಯಾರ್ಥಿಗಳು ವಿಕಸಿತ ಭಾರತ ನಿರ್ಮಾಣದ ರೂವಾರಿಗಳಾಗಬೇಕೆಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ
- ಒಂದು ಸಾವಿರ ದಿನ ಪೂರೈಸಿದ ಹಿನ್ನೆಲೆ - ಹಾವೇರಿಯಲ್ಲಿ ಒಂದು ಲಕ್ಷ ಜನರಿಗೆ ಹಕ್ಕುಪತ್ರ ವಿತರಿಸಲು ಸರ್ಕಾರ ನಿರ್ಧಾರ
- ಕೇಂದ್ರ ಬಜೆಟ್‌ಗೆ ಕ್ಷಣಗಣನೆ - ಸಣ್ಣ ಕೈಗಾರಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವಂತೆ ಎಫ್‌ಕೆಸಿಸಿಐ ಸಲಹೆ

<><*<><>*><>

ಮಕ್ಕಳ ಸಾಮಾಜಿಕ ಮಾಧ್ಯಮ ಪ್ರವೇಶವನ್ನು ನಿರ್ಬಂಧಿಸುವ ಕುರಿತಂತೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಬಿಜೆಪಿ ಶಾಸಕ ಎಸ್.ಸುರೇಶ್‌ಕುಮಾರ್ ಮಕ್ಕಳ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಹಿರಿಯ ನಾಯಕರು ಎತ್ತಿರುವ ವಿಷಯ ತುಂಬಾ ಗಂಭೀರವಾಗಿದೆ. ಕೃತಕಬುದ್ಧಿಮತ್ತೆ ಮತ್ತು ಸಾಮಾಜಿಕ ಮಾಧ್ಯಮದ ಜವಾಬ್ದಾರಿಯುತ ಬಳಕೆಯ ವಿಷಯದಲ್ಲಿ ಏನು ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ವಿಧಾಸಭೆಯಲ್ಲಿಂದು ಬಳ್ಳಾರಿಯಲ್ಲಿ ಮಹರ್ಷಿ ವಾಲ್ಮೀಕಿ ಬ್ಯಾನರ್ ಹರಿದ ಪ್ರಕರಣ ಪ್ರತಿಧ್ವನಿಸಿತು. ಈ ವೇಳೆ ಕಾಂಗ್ರೆಸ್ ಶಾಸಕ ನಾಗೇಂದ್ರ ಹಾಗೂ ಬಿಜೆಪಿಯ ಜನಾರ್ದನ ರೆಡ್ಡಿ ನಡುವೆ ಮಾತಿನ ಚಕಮಕಿ ನಡೆದು ಗೊಂದಲದ ವಾತಾವರಣ ನಿರ್ಮಾಣವಾಯಿತು. ಬಿ. ನಾಗೇಂದ್ರ ಮಾತನಾಡಿ, ವಾಲ್ಮೀಕಿ ಬ್ಯಾನರ್ ಕಿತ್ತು ಹಾಕಿ ಬಿಜೆಪಿ ನಾಯಕರು ಘಟನೆ ವಿಕೋಪಕ್ಕೆ ಹೋಗಲು ಕಾರಣ ಎಂದು ಆರೋಪಿಸಿದರು. ಈ ವೇಳೆ ಮಧ್ಯಪ್ರವೇಶಿಸಿದ ಜನಾರ್ದನ ರೆಡ್ಡಿ ಆಕ್ಷೇಪ ವ್ಯಕ್ತಪಡಿಸಿದರು. ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಆಡಳಿತ ಪಕ್ಷದ ಸದಸ್ಯರು ಬಿ.ನಾಗೇಂದ್ರ ಅವರಿಗೆ ಬೆಂಬಲ ವ್ಯಕ್ತಪಡಿಸಿದರು. ಈ ವೇಳೆ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಸಭಾಧ್ಯಕ್ಷ ಯು.ಟಿ.ಖಾದರ್ ಮಧ್ಯ ಪ್ರವೇಶಿಸಿ ಸದನವನ್ನು ನಿಯಂತ್ರಣಕ್ಕೆ ತಂದರು. ಬಳಿಕ ಬಿಜೆಪಿಯ ಧೀರಜ್ ಮುನಿರಾಜು ಮಾತನಾಡಿ, ಸಂಸ್ಕರಿಸಿದ ಕೊಳಚೆ ನೀರನ್ನು ದಯವಿಟ್ಟು ದೊಡ್ಡಬಳ್ಳಾಪುರ ಕೆರೆಗೆ ಹರಿಸಬೇಡಿ ಎಂದು ಸರ್ಕಾರಕ್ಕೆ

ಮನವಿ ಮಾಡಿದರು. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನರಿಗೆ ದಯವಿಟ್ಟು ಸಿಹಿ ಕುಡಿಯುವ ನೀರು ಪೂರೈಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

**<><*<><>*><>**

ಕೇಂದ್ರ ಸರ್ಕಾರದ ಜಿಎಸ್‌ಟಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಭಾಗವಹಿಸದಿರುವುದನ್ನು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಖಂಡಿಸಿದ್ದಾರೆ. ಮೇಲ್ಮನೆಯಲ್ಲಿಂದು ಮಾತನಾಡಿದ ಅವರು, ರಾಜ್ಯದ ಅನ್ಯಾಯದ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಬೇಕಾಗಿತ್ತು ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಎಷ್ಟು ಬಾರಿ ಜಿಎಸ್‌ಟಿ ಕೌನ್ಸಿಲ್ ಸಭೆಗೆ ಹೋಗಿದ್ದಾರೆ ಎಂದು ಪ್ರಶ್ನಿಸಿದರು. ಈ ವೇಳೆ ವಿಶ್ವನಾಥ್ ಹೇಳಿಕೆಗೆ ಆಡಳಿತ ಪಕ್ಷದ ಸದಸ್ಯರು ತೀವ್ರ ವಿರೋಧ ವ್ಯಕ್ತಪಡಿಸಿದರು. ಇದೇ ವೇಳೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಜಿಎಸ್‌ಟಿ ಸಭೆಗೆ ಕಡ್ಡಾಯವಾಗಿ ಮುಖ್ಯಮಂತ್ರಿಗಳೇ ಹೋಗಬೇಕೆಂಬ ನಿಯಮವಿಲ್ಲ, ರಾಜ್ಯದ ಪರವಾಗಿ ಯಾರನ್ನಾದರೂ ಕಳುಹಿಸಬಹುದು ಎಂದು ಸರ್ಕಾರದ ನಡೆಯನ್ನು ಸಮರ್ಥಿಸಿಕೊಂಡರು.

**<><*<><>*><>**

ವಿದ್ಯಾರ್ಥಿಗಳು ವಿಕಸಿತ ಭಾರತ ನಿರ್ಮಾಣದ ರೂವಾರಿಗಳಾಗಬೇಕೆಂದು  ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯದ ೧೩ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪದವಿ ಎನ್ನುವುದು ಕೇವಲ ಕಾಗದದ ತುಣುಕಲ್ಲ. ಪ್ರತಿಯೊಬ್ಬ ವಿದ್ಯಾರ್ಥಿಯೂ ದೇಶದ ಪ್ರಗತಿಯಲ್ಲಿ ಭಾಗಿಯಾಗುವ ಮೂಲಕ ೨೦೪೭ರ ಹೊತ್ತಿಗೆ ಭಾರತವನ್ನು ಜಗತ್ತಿಗೆ ಮಾದರಿಯನ್ನಾಗಿ ಮಾಡಬೇಕು ಎಂದು ತಿಳಿಸಿದ್ದಾರೆ. ಇಂದಿನ ಆಧುನಿಕ ಯುಗದಲ್ಲಿ ಕೃತಕ ಬುದ್ಧಿಮತ್ತೆ  ಮತ್ತು ಹೊಸ ತಂತ್ರಜ್ಞಾನಗಳು ಅನಿವಾರ್ಯ. ಆದರೆ, ಈ ತಂತ್ರಜ್ಞಾನವು ಮಾನವೀಯ ಮೌಲ್ಯಗಳೊಂದಿಗೆ ಬೆರೆತಾಗ ಮಾತ್ರ ಸಮಾಜಕ್ಕೆ ಒಳಿತಾಗಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ : ಥಾವರ್ ಚಂದ್ ಗೆಹ್ಲೋಟ್**

ಇದೇ ಸಂದರ್ಭದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸಿದ ಮೂವರು ಗಣ್ಯರಿಗೆ ರಾಜ್ಯಪಾಲರು ಗೌರವ ಡಾಕ್ಟರೇಟ್ ಪದವಿ ನೀಡಿ ಪ್ರದಾನ ಮಾಡಿದರು.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸರ್ಕಾರ ಒಂದು ಸಾವಿರ ದಿನಗಳನ್ನು ಪೂರೈಸಿದ ಹಿನ್ನಲೆಯಲ್ಲಿ ಫೆಬ್ರವರಿ ೧೩ರಂದು ಹಾವೇರಿಯಲ್ಲಿ ೧ ಲಕ್ಷ ಜನರಿಗೆ ಹಕ್ಕುಪತ್ರ ವಿತರಿಸಲಿದ್ದಾರೆ. ಕಂದಾಯ ಸಚಿವ ಕೃಷ್ಣಬೈರೇಗೌಡ ಈ ವಿಷಯವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ದಶಕಗಳಿಂದ ತಮ್ಮ ಮನೆಗಳಲ್ಲಿ ವಾಸಿಸುತ್ತಿದ್ದರು ಕಾನೂನು ಬದ್ಧ ಹಕ್ಕುಪತ್ರವಿಲ್ಲದೇ ಬದುಕುತ್ತಿದ್ದ ಅಸಹಾಯಕ ಕುಟುಂಬಗಳಿಗೆ ಭದ್ರತೆ ಒದಗಿಸುವ ಉದ್ದೇಶದಿಂದ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಿಂದ ಸುಮಾರು ೪ ಲಕ್ಷ ಜನರಿಗೆ ಲಾಭವಾಗಲಿದೆ.

**<><*<><>*><>**

ಸರ್ಕಾರಿ ನೌಕರರು ದೈನಂದಿನ ವೃತ್ತಿಯ ಜೊತೆಗೆ ಕ್ರೀಡೆ, ವ್ಯಾಯಾಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ದೈಹಿಕವಾಗಿ, ಮಾನಸಿಕವಾಗಿ ಆರೋಗ್ಯ ವೃದ್ಧಿಯಾಗಲಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು

ಗ್ರಾಮಾಂತರ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೈನಂದಿನ ಜೀವನದಲ್ಲಿ ಗುಣಮಟ್ಟದ ಆಹಾರ ಸೇವನೆ ಜೊತೆಗೆ ಕ್ರೀಡೆ, ವ್ಯಾಯಾಮ, ಯೋಗದಲ್ಲಿ ತೊಡಗಿಸಿಕೊಂಡು ಕರೆ ನೀಡಿದ್ದಾರೆ. ದೇವನಹಳ್ಳಿ ಟೌನ್ ಕ್ರೀಡಾಂಗಣ ಅಭಿವೃದ್ಧಿಗೆ ೧೩.೫ ಕೋಟಿ ರೂಪಾಯಿ ನಿಗದಿ ಮಾಡಲಾಗಿದೆ. ಜಿಲ್ಲಾ ಕ್ರೀಡಾಂಗಣಕ್ಕೆ ೨೫ ಕೋಟಿ ರೂಪಾಯಿ ಮಂಜೂರಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಇದೇ ಭಾನುವಾರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಲಿದ್ದಾರೆ. ಬಜೆಟ್ ಕುರಿತಂತೆ ರಾಜ್ಯದ ಜನತೆ ಕಾತರದಿಂದ ಕಾಯುತ್ತಿದ್ದು, ಹಲವು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾರೆಡ್ಡಿ, ಈ ಬಾರಿಯ ಬಜೆಟ್‌ನಲ್ಲಿ ಸಣ್ಣ ಕೈಗಾರಿಕೆಗಳು ಹಾಗೂ ಕೈಗಾರಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸಣ್ಣ ಹಾಗೂ ಸೂಕ್ಷ್ಮ ಕೈಗಾರಿಕೆಗಳಿಗೆ ವಿಶೇಷ ಕೈಗಾರಿಕಾ ನೀತಿ ಜಾರಿಗೊಳಿಸುವಂತೆ ಒತ್ತಾಯಿಸಿದ್ದಾರೆ.

ಧ್ವನಿ : ಉಮಾರೆಡ್ಡಿ ( ಸೆಕೆಂಡ್‌ಗಳು)

<><*<><>*><>

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಜಿಲ್ಲಾ ಕ್ಷಯರೋಗ ಮತ್ತು ಕುಷ್ಠರೋಗ ನಿರ್ಮೂಲನಾಧಿಕಾರಿಗಳ ಕಾರ್ಯಾಲಯ ಕೊಪ್ಪಳ, ಸಹಯೋಗದಲ್ಲಿ ಇಂದು ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ ನಡೆಯಿತು. ಜಿಲ್ಲಾಧಿಕಾರಿ ಡಾ.ಸುರೇಶ್. ಬಿ. ಇಟ್ನಾಳ ಮಾತನಾಡಿ, ಗ್ರಾಮೀಣ ಪ್ರದೇಶಗಳಿಗೆ ಅಧಿಕಾರಿಗಳು ಹೋಗಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಕುರಿತು ಜಾಗೃತಿ ಮೂಡಿಸಿ ಕುಷ್ಠರೋಗವನ್ನು ಪತ್ತೆಹಚ್ಚಿ ಚಿಕಿತ್ಸೆ ನೀಡಬೇಕೆಂದು ಸಲಹೆ ನೀಡಿದ್ದಾರೆ. ಇದೇ ವೇಳೆ "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ-೨೦೨೬" ಕರಪತ್ರಗಳನ್ನು ಅವರು ಬಿಡುಗಡೆ ಮಾಡಿದರು. ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ "ಸ್ಪರ್ಶ ಕುಷ್ಠರೋಗ ಜನ ಜಾಗೃತಿ ಅಭಿಯಾನ ಕಾರ್ಯಕ್ರಮ ಜರುಗಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್.ನೀಲಗುಂದ "ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಉದ್ಘಾಟಿಸಿ, ಕುಷ್ಠರೋಗ ಹರಡುವ ವಿಧಾನ, ರೋಗದ ಲಕ್ಷಣಗಳು ಹಾಗೂ ಚಿಕಿತ್ಸೆಯ ಕುರಿತು ಮಾಹಿತಿ ನೀಡಿದರು.

<><*<><>*><>

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ೧೩ ದಿನ ಪೂರೈಸಿದೆ. ಲಕ್ಕುಂಡಿ ಗ್ರಾಮದ ಹೊರವಲಯದ ತೋಟದ ಭಾವಿಯ ಕಟ್ಟಡದ ಗೋಡೆಯಲ್ಲಿ ಶಿಲ್ಪ ಕಲಾ ಕೃತಿ ಪತ್ತೆಯಾಗಿದೆ. ಇಂದು ಬೆಳಗ್ಗೆ ಉತ್ಖನನ ಪ್ರಾರಂಭವಾಗುತ್ತಿದಂತೆಯೇ ನಾಗರ ಹಾವು ಕಾಣಿಸಿಕೊಂಡಿದೆ. ಇದರಿಂದಾಗಿ ಕೆಲ ಕಾಲ ಉತ್ಖನನ ಕಾರ್ಯ ಸ್ಥಗಿತ ಗೊಂಡಿತ್ತು. ನಂತರ ಮತ್ತೆ ಉತ್ಖನನ ಕಾರ್ಯ ಮುಂದುವರೆಯಿತು ಎಂದು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ತಿಳಿಸಿದ್ದಾರೆ.

<><*<><>*><>

ಪ್ರವಾಸೋದ್ಯಮ ಕ್ಷೇತ್ರ ಬೆಳೆದಂತೆಲ್ಲಾ ಹೆಚ್ಚಿನ ಜನರು ಕಾಡಿನ ಮೇಲೆ ವ್ಯಾಮೋಹ ಬೆಳೆಸಿಕೊಳ್ಳುತ್ತಿದ್ದು, ಕಾಡು ಪ್ರಾಣಿಗಳು ಊರಿನತ್ತ ಮುಖ ಮಾಡುತ್ತಿವೆ. ಮಾನವ - ವನ್ಯಜೀವಿ ಸಂಘರ್ಷ ತಡೆಗೆ, ಅರಣ್ಯದ ಮೇಲಿನ ಒತ್ತಡ ತಗ್ಗಿಸಲು ಈ ಬಜೆಟ್‌ನಲ್ಲಿ ಕೃಷಿ ಪ್ರವಾಸೋದ್ಯಮಕ್ಕೆ

ಉತ್ತೇಜನ ನೀಡಬೇಕೆಂದು ರೈತರು ಜಿಲ್ಲಾಧಿಕಾರಿ ಶ್ರೀರೂಪಾ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ರೈತ ಸಂಘದ ಹೊನ್ನೂರು ಪ್ರಕಾಶ್, ಪ್ರಗತಿಪರ ಕೃಷಿಕ ದಯಾನಂದ್, ಬೆಂಗಳೂರಿನ ಕೃಷಿಕ ಶ್ರೀವತ್ಸ ಜಿಲ್ಲಾಧಿಕಾರಿ ಭೇಟಿ ಮಾಡಿ ಚಾಮರಾಜನಗರ ಮತ್ತು ಮೈಸೂರು ಭಾಗದಲ್ಲಿ ಕೃಷಿ ಪ್ರವಾಸೋದ್ಯಮ ಆರಂಭಿಸಲು ಪೈಲಟ್ ಯೋಜನೆಗೆ ಮುಂದಾಗಬೇಕು, ಶಾಲಾ ವಿದ್ಯಾರ್ಥಿಗಳಿಗೆ ಕೃಷಿ ಪ್ರವಾಸೋದ್ಯಮ ಮೂಲಕ ಕೃಷಿ ಪಾಠ ಕಡ್ಡಾಯ ಮಾಡಬೇಕು, ರಾಜ್ಯಮಟ್ಟದ ತಜ್ಞರ ಸಮಿತಿ ರಚಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**